# ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಹದಿಮೂರನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

## ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 20ನೇ ಮಾರ್ಚ್, 2017
(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

### 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

### 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**I. ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:**

ಭಾರತ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2016ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಈ ಕೆಳಕಂಡ ವರದಿಯನ್ನು ಸಭೆಯ ಮುಂದಿಡುವುದು.

1. ರಾಜಸ್ವ ವಲಯದ ಮೇಲಿನ 2016ನೇ ಸಾಲಿನ ವರದಿ (ಸಂಖ್ಯೆ–5).
2. ಸಾಮಾನ್ಯ ಮತ್ತು ಸಾಮಾಜಿಕ ವಲಯದ ಮೇಲಿನ 2017ನೇ ವರ್ಷದ ವರದಿ(ಸಂಖ್ಯೆ–2).
3. ಆರ್ಥಿಕ ವಲಯದ ಮೇಲಿನ 2017ನೇ ವರ್ಷದ ವರದಿ (ಸಂಖ್ಯೆ–3)

II. ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಹಾಗೂ ನಾಲ್ಕನೇ ಪಟ್ಟಿಯ ರೀತ್ಯ.

–2–

## 3. ವಿತ್ತೀಯ ಕಾರ್ಯಕಲಾಪಗಳು

"2017–18ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ" .

## 4. ಶಾಸನ ರಚನೆ

### ವಿಧೇಯಕಗಳನ್ನು ಮಂಡಿಸುವುದು

**1. ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು :–**

ಅ) 2017ನೇ ಸಾಲಿನ ಅಂತರ್ – ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

**2. ಶ್ರೀ ಕಾಗೋಡು ತಿಮ್ಮಪ್ಪ (ಕಂದಾಯ ಸಚಿವರು) ಅವರು :–**

ಅ) 2017ನೇ ಸಾಲಿನ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

**3. ಶ್ರೀ ಬಸವರಾಜ ರಾಯರಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು :–**

ಅ) 2017ನೇ ಸಾಲಿನ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

## 5. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಡಿ. ನಾಗರಾಜಯ್ಯ** ಇವರು – ಕುಣಿಗಲ್ ತಾಲ್ಲೂಕಿನಲ್ಲಿ ನಿರ್ಮಾಣ ಹಂತದಲ್ಲಿರುವ ಮಿನಿ ವಿಧಾನಸೌಧ ಕಟ್ಟಡವನ್ನು ಪೂರ್ಣಗೊಳಿಸದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2. **ಶ್ರೀ ವೈ.ಎ. ನಾರಾಯಣಸ್ವಾಮಿ** ಇವರು – ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ರೆಫರೆಲ್ ಆಸ್ಪತ್ರೆಗಳು ಸೇರಿದಂತೆ ಭಾರತೀಯ ವೈದ್ಯ ಪದ್ಧತಿಯ ಆಯುಷ್ ಅಡಿಯಲ್ಲಿ ಬರುವ ಸರ್ಕಾರಿ ಆಯುರ್ವೇದ ಆಸ್ಪತ್ರೆಗಳಲ್ಲಿ ವೈದ್ಯರುಗಳನ್ನು ನೇಮಕಾತಿ ಮಾಡಿಕೊಳ್ಳುವಾಗ ಅನುಸರಿಸುತ್ತಿರುವ ಮಾನದಂಡಗಳ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. **ಶ್ರೀ ಲಕ್ಷ್ಮಣ ಸಂಗಪ್ಪ ಸವದಿ** ಇವರು – ರಾಜ್ಯದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

4. **ಶ್ರೀ ಎಸ್.ಎನ್. ನಾರಾಯಣಸ್ವಾಮಿ** ಇವರು – ಬಂಗಾರಪೇಟೆ ಕ್ಷೇತ್ರದ ತೋಟಗಾರಿಕೆ ಇಲಾಖೆಯ ಕಟ್ಟಡ ಶಿಥಿಲಾವಸ್ಥೆಯಲ್ಲಿರುವುದರಿಂದ ಹೊಸ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ನೀಡುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

5. **ಶ್ರೀ ಯು.ಬಿ. ಬಣಕಾರ್** ಇವರು – ಹಾವೇರಿ ಜಿಲ್ಲೆಯ ಹಿರೇಕೆರೂರ ಮತ್ತು ರಾಣೆಬೆನ್ನೂರು ತಾಲ್ಲೂಕು ಕೇಂದ್ರದಲ್ಲಿ ಅರಣ್ಯ ಹಕ್ಕು ಕಾಯ್ದೆ ಅಡಿಯಲ್ಲಿ ಹಾಗೂ ಅಕ್ರಮ – ಸಕ್ರಮ ಸಾಗುವಳಿದಾರರಿಗೆ ಪಟ್ಟಾ ನೀಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದವರು ಧರಣಿ ನಡೆಸುತ್ತಿರುವ ವಿಷಯದ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6. **ಶ್ರೀ ಎಂ.ಟಿ. ಕೃಷ್ಣಪ್ಪ** ಇವರು – ತುರುವೇಕೆರೆ ತಾಲ್ಲೂಕಿನ ಮಾಯಸಂದ್ರ ಗ್ರಾಮದ ಗೋಶಾಲೆಗೆ ಮೂಲಭೂತ ಸೌಲಭ್ಯಗಳ ಕೊರತೆಯಿಂದ ದನ-ಕರುಗಳಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7. **ಡಾ॥ ನಾರಾಯಣಗೌಡ** ಇವರು – ಮಂಡ್ಯ ಜಿಲ್ಲೆ, ಕೆ.ಆರ್. ಪೇಟೆ ತಾಲ್ಲೂಕಿನ ಹೇಮಾವತಿ ಎಡದಂಡೆ ನಾಲೆಯ ಹೊಸಹೊಳಲು ಮೇಲ್ಗಾಲುವೆಯ ಕಿ.ಮೀ.11ರಿಂದ 16ರ ವರೆಗಿನ ಅಪೂರ್ಣವಾಗಿರುವ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

8. **ಶ್ರೀ ಬಿ.ಆರ್. ಪಾಟೀಲ್ ಮತ್ತು ಶ್ರೀ ಶಿವಾನಂದ ಎಸ್. ಪಾಟೀಲ್** ಇವರುಗಳು – ಉತ್ತರ ಕರ್ನಾಟಕದ ಕಲಬುರಗಿ, ಬೀದರ, ಯಾದಗಿರಿ, ರಾಯಚೂರು ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಕಳೆದ ಹಂಗಾಮಿನಲ್ಲಿ ಉತ್ಪಾದನೆಯಾಗಿರುವ ತೊಗರಿ ಖರೀದಿಯಾಗದಿರುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

9. **ಶ್ರೀ ಕೆ.ಎಂ. ಶಿವಲಿಂಗೇಗೌಡ** ಇವರು – ಪ್ರಸ್ತುತ ಆರ್ಯ ವೈಶ್ಯ ಸಮಾಜವನ್ನು ರಾಜ್ಯದ ಜಾತಿ ಪಟ್ಟಿಯಲ್ಲಿ ಸೇರಿಸದಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

10. **ಶ್ರೀ ಕೆ.ಎಂ. ತಿಮ್ಮರಾಯಪ್ಪ** ಇವರು – ಪಾವಗಡ ತಾಲ್ಲೂಕಿನ ವ್ಯಾಪ್ತಿಯಲ್ಲಿನ ವಿವಿಧ ಯೋಜನೆಯಡಿಯಲ್ಲಿ ಮನೆಗಳನ್ನು ನಿರ್ಮಿಸಿಕೊಳ್ಳಲು ಬಡ ಕುಟುಂಬದ ಫಲಾನುಭವಿಗಳಿಗೆ ಮರಳು ಸಾಗಾಣಿಕೆಯಲ್ಲಿ ಆಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

11. **ಶ್ರೀ ಗೋವಿಂದ ಎಂ. ಕಾರಜೋಳ** ಇವರು – ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸಿಜೇರಿಯನ್ ಉಪಕರಣಗಳನ್ನು ಪೂರೈಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

12. **ಶ್ರೀ ಎಂ. ಕೃಷ್ಣಾರೆಡ್ಡಿ** ಇವರು – ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನಲ್ಲಿ ವಿವಿಧ ಯೋಜನೆಗಳಡಿ ಕೊರೆದಿರುವ ಕೊಳವೆ ಬಾವಿಗಳಿಗೆ ಸಮರ್ಪಕವಾಗಿ ಟ್ರಾನ್ಸ್‌ಫಾರ್ಮರ್‌ಗಳನ್ನು ವಿತರಣೆ ಮಾಡದಿರುವುದರಿಂದ ಆಗಿರುವ ತೊಂದರೆಯ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

13. **ಶ್ರೀ ಹೆಚ್.ಡಿ. ರೇವಣ್ಣ** ಇವರು – ಹಾಸನ ಜಿಲ್ಲೆ, ಹೊಳೆನರಸೀಪುರ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳನ್ನೊಳಗೊಂಡಂತೆ ಖಾಲಿ ಇರುವ ಎಲ್ಲಾ ಹಂತದ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ರೋಗಿಗಳ ಚಿಕಿತ್ಸೆಗೆ ತೊಂದರೆ ಉಂಟಾಗಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

14. **ಶ್ರೀ ಪಿಳ್ಳ ಮುನಿಶಾಮಪ್ಪ** ಇವರು – ದೇವನಹಳ್ಳಿ ತಾಲ್ಲೂಕಿನ ಕಸಬಾ ಹೋಬಳಿ ವ್ಯಾಪ್ತಿಯಲ್ಲಿ ಶೋಭಾ ಡೆವಲಪರ್ಸ್‌ರವರು ಅನಧಿಕೃತವಾಗಿ ಸ್ವಾಧೀನ ಪಡಿಸಿಕೊಂಡಿರುವ ಜಮೀನುಗಳನ್ನು ತೆರವುಗೊಳಿಸುವುದು ಹಾಗೂ ಅನಧಿಕೃತ ಸ್ವಾಧೀನ ಪ್ರಕ್ರಿಯೆಯಲ್ಲಿ ಸಹಕರಿಸಿರುವ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

15. **ಶ್ರೀ ಕೆ.ಜಿ. ಬೋಪಯ್ಯ** ಇವರು – ಕೊಡಗು ಜಿಲ್ಲೆಯಲ್ಲಿ ಕಾಡಾನೆಗಳ ಹಾವಳಿಯನ್ನು ಶಾಶ್ವತವಾಗಿ ನಿಯಂತ್ರಿಸಲು ವಿವಿಧ ಯೋಜನೆಗಳಿಗೆ ಒಪ್ಪಿಗೆ ಮತ್ತು ಅನುದಾನ ಬಿಡುಗಡೆ ಮಾಡದಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

16.**ಶ್ರೀ ಸಾ.ರಾ. ಮಹೇಶ್** ಇವರು – ರಾಜ್ಯದಲ್ಲಿ ನ್ಯಾಯಬೆಲೆ ಅಂಗಡಿಯಿಂದ ಪಡಿತರ ಕೂಪನ್ ವಿತರಿಸಲು ಅವಶ್ಯಕತೆಯಿರುವ ಕಂಪ್ಯೂಟರ್, ಪ್ರಿಂಟರ್ ಮತ್ತು ಯು.ಪಿ.ಎಸ್. ಸಲಕರಣೆಗಳನ್ನು ನ್ಯಾಯಬೆಲೆ ಅಂಗಡಿಯವರುಗಳಿಗೆ ಸರ್ಕಾರವು ಒದಗಿಸುವ ವಿಷಯದ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

17.**ಶ್ರೀ ಸಿದ್ದು ಬಿ. ನ್ಯಾಮಗೌಡ** ಇವರು – ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿನ ಗಲಿಗಲಿ ಹತ್ತಿರ ನಿರ್ಮಿಸಿದ ಬ್ಯಾರೇಜ್‌ನಲ್ಲಿ ನೀರು ಇಲ್ಲದೆ ಇರುವುದರಿಂದ ಜನರಿಗೆ, ದನಕರುಗಳಿಗೆ ಕುಡಿಯುವ ನೀರಿಗೆ ಭೀಕರ ಸಮಸ್ಯೆ ಉಂಟಾಗಿದ್ದು, ರಾಜ್ಯ ಸರ್ಕಾರ ಮಹಾರಾಷ್ಟ್ರದಿಂದ ಮಾರ್ಚ್ ತಿಂಗಳ ಒಳಗಾಗಿ 2 ಟಿ.ಎಂ.ಸಿ. ನೀರು ಬಿಡಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

18.**ಶ್ರೀ ಎಂ.ಟಿ. ಕೃಷ್ಣಪ್ಪ** ಇವರು – ತುರುವೇಕೆರೆ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಮಣಿಚಂಡೂರು ಪಂಚಾಯಿತಿ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಮೀನನ್ನು ಸರ್ಕಾರಿ ಇಂಜನಿಯರಿಂಗ್ ಕಾಲೇಜಿಗಾಗಿ ಅವಶ್ಯವಿರುವಷ್ಟು ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳುವ ವಿಷಯದ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

19.**ಶ್ರೀ ವಿ. ಸುನೀಲ್ ಕುಮಾರ್** ಇವರು – ಕಾರ್ಕಳ ತಾಲ್ಲೂಕಿನ ಗ್ರಾಮೀಣ ಭಾಗಗಳಲ್ಲಿ ಗ್ರಾಮೀಣ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

20.**ಶ್ರೀ ಹೆಚ್.ಡಿ. ರೇವಣ್ಣ** ಇವರು – ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿಗೆ ಸ್ನಾತಕೋತ್ತರ ಕೇಂದ್ರದಲ್ಲಿ ವಿವಿಧ ಕೋರ್ಸ್‌ಗಳು ಹಾಗೂ ಶಾಂತಿಗ್ರಾಮ ಹೋಬಳಿ ಮೊಸಳೆಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಎಂ.ಕಾಂ. ಕೋರ್ಸ್‌ನ್ನು 2017-18ನೇ ಸಾಲಿನಿಂದ ಹೊಸದಾಗಿ ಮಂಜೂರು ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

21.**ಶ್ರೀ ಯು.ಬಿ. ಬಣಕಾರ** ಇವರು – ಹಿರೇಕೇರೂರ ತಾಲ್ಲೂಕ ಮುದ್ದಿನಕೊಪ್ಪ ಗ್ರಾಮದ ಕೆರೆಯ ಜಾಗದಲ್ಲಿ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವುದನ್ನು ತೆರವುಗೊಳಿಸಿ ಹದ್ದುಬಸ್ತು ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

22.**ಶ್ರೀ ಎನ್.ಎ. ಹ್ಯಾರೀಸ್** ಇವರು – ಶಾಂತಿನಗರದ ಬಿ.ಬಿ.ಎಂ.ಪಿ. ವ್ಯಾಪ್ತಿಯ ವಾರ್ಡ್ 117ರ ಬಡಾವಣೆಯಲ್ಲಿ ಸಾರ್ವಜನಿಕರಿಗೆ ಉದ್ಯಾನವನ ಹಾಗೂ ಮಕ್ಕಳಿಗೆ ಆಟದ ಮೈದಾನ ಇಲ್ಲದಿರುವುದರಿಂದ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

**23.ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ ಮತ್ತು ಹೆಚ್.ಡಿ. ರೇವಣ್ಣ** ಇವರುಗಳು – ಹಾಸನ ಜಿಲ್ಲೆಯಲ್ಲಿ ಅಲೂಗಡ್ಡೆ ಬೆಳೆಗೆ ಅಂಗಮಾರಿ ರೋಗ ಹಾಗೂ ಮಳೆಯ ಕೊರತೆಯಿಂದ ತೀವ್ರ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ರೈತರಿಗೆ ಪರಿಹಾರವನ್ನು ನೀಡುವುದು ಹಾಗೂ ಆಲೂಗಡ್ಡೆ ಬಿತ್ತನೆ ಬೀಜಕ್ಕೆ ಶೇ. 90ರಷ್ಟು ಸಬ್ಸಿಡಿ ನೀಡುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

**24.ಶ್ರೀ ಪಿಳ್ಳ ಮುನಿಶಾಮಪ್ಪ ಇವರು** – ದೇವನಹಳ್ಳಿ ತಾಲ್ಲೂಕಿನ ಕನ್ನಮಂಗಲ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಓ-ಜೋನ್ ಅರ್ಬನ ಇನ್ಫ್ರಾ ಡೆವಲಪರ್ಸ್ ಪ್ರೈವೇಟ್ ಲಿ. ಸಂಸ್ಥೆಯವರು ಅನಧಿಕೃತವಾಗಿ ಒತ್ತುವರಿ ಮಾಡಿಕೊಂಡಿರುವ ಸರ್ಕಾರಿ ಜಮೀನನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

**25.ಶ್ರೀ ಗುರುಪಾಟೀಲ ಶಿರವಾಳ** ಇವರು – ಯಾದಗಿರಿ ಜಿಲ್ಲೆ ಸುರಪುರ ತಾಲ್ಲೂಕು ನಗನೂರ ವಿ.ಎಸ್.ಎಸ್. ಬ್ಯಾಂಕ್ ಎದುರಿಗೆ ಧರಣಿ ನಿರತರ ಬೇಡಿಕೆಗಳ ಬಗ್ಗೆ ವಿಚಾರಣೆ ನಡೆಸಿ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. **ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ, ಎನ್. ಚಲುವರಾಯಸ್ವಾಮಿ ಮತ್ತು ಬಿ.ಜೆಡ್. ಜ಼ಮೀರ್ ಅಹ್ಮದ್ ಖಾನ್** ಇವರುಗಳು – ರಾಜ್ಯದಲ್ಲಿ ಬರಗಾಲದಿಂದ ಕುಡಿಯುವ ನೀರಿಗೆ ತೊಂದರೆಯಾಗಿರುವುದರಿಂದ ರೈತರ ಸಹಯೋಗದೊಂದಿಗೆ ಕೆರೆಗಳ ಹೂಳನ್ನು ತೆಗೆಸಿ ನೀರು ಶೇಖರಣಾ ಸಾಮರ್ಥ್ಯವನ್ನು ಹೆಚ್ಚಿಸುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2. **ಶ್ರೀಯುತರುಗಳಾದ ಕೆ.ಎಂ. ತಿಮ್ಮರಾಯಪ್ಪ, ಕ್ಯಾತಸಂದ್ರ ಎನ್. ರಾಜಣ್ಣ, ಪಿ.ಎಂ. ನರೇಂದ್ರಸ್ವಾಮಿ, ಪಿ.ರಾಜೀವ್, ಪಿ.ಟಿ. ಪರಮೇಶ್ವರನಾಯಕ್ ಹಾಗೂ** ಇತರರು – ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸಲಾಗಿರುವ ಅಧಿಸೂಚನೆಯಲ್ಲಿನ ಮೀಸಲಾತಿ ಗೊಂದಲಗಳನ್ನು ನಿವಾರಿಸುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

–7–

3. **ಶ್ರೀಯುತರುಗಳಾದ ಬಿ.ಆರ್. ಪಾಟೀಲ್ ಕೆ.ಎಸ್. ಪುಟ್ಟಣ್ಣಯ್ಯ, ಹೆಚ್.ಸಿ. ಬಾಲಕೃಷ್ಣ, ಆರ್. ಅಖಂಡ ಶ್ರೀನಿವಾಸ ಮೂರ್ತಿ, ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಹಾಗೂ** ಇತರರು – ದೃಶ್ಯಮಾಧ್ಯಮದವರು ಶಾಸಕರ ವ್ಯಕ್ತಿತ್ವಕ್ಕೆ ಚ್ಯುತಿ ತರುವಂಥ ಅವಹೇಳನಕಾರಿ ಸುದ್ದಿಗಳನ್ನು ಪ್ರಸಾರ ಮಾಡುತ್ತಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

**ಎಸ್. ಮೂರ್ತಿ**
ಕಾರ್ಯದರ್ಶಿ(I/c)

---

**ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
http://kla.kar.nic.in/assembly/lob/lob.htm